# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | **509** |
| ಸದಸ್ಯರ ಹೆಸರು | ಶ್ರೀ ಐವನ್ ಡಿ'ಸೋಜಾ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11.03.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಕರ್ನಾಟಕಕ್ಕೆ ಪ್ರತ್ಯೇಕವಾದ ಮರಳು ನೀತಿ ಜಾರಿಗೆ ತರುವುದಾಗಿ ಘೋಷಿಸಿದ್ದು, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು; | • ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2021ನ್ನು ಜಾರಿಗೊಳಿಸಲಾಗಿರುತ್ತದೆ.<br>• ಸದರಿ ತಿದ್ದುಪಡಿ ನಿಯಮ 31-ZA ರಲ್ಲಿ, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾಣೆ ಮಂತ್ರಾಲಯದ O.M ಸಂಖ್ಯೆ 11-83/ 2005-IA-III (Vol-III), ದಿನಾಂಕ 08.11.2011ರ ಆದೇಶದಂತೆ, ಕರಾವಳಿ ಜಿಲ್ಲೆಗಳ ಕರಾವಳಿ ನಿಯಂತ್ರಣ ವಲಯ (CRZ) ಪ್ರದೇಶಗಳಲ್ಲಿ ಮರಳು ದಿಬ್ಬಗಳನ್ನು ತೆರವುಗೊಳಿಸಲು ಸಾಂಪ್ರದಾಯಿಕ ಮರಳು ತೆಗೆಯುವ ವ್ಯಕ್ತಿ / ಸಮುದಾಯದವರಿಗೆ ಅವಕಾಶ ಕಲ್ಪಿಸಲಾಗಿರುತ್ತದೆ.<br>• ಅಂತೆಯೇ, ತಿದ್ದುಪಡಿ ನಿಯಮ 31-ZB ರಲ್ಲಿ, ಕರಾವಳಿ ಜಿಲ್ಲೆಗಳ ಕರಾವಳಿ ನಿಯಂತ್ರಣ ವಲಯ ಹೊರತುಪಡಿಸಿದ (Non-CRZ) ಉನ್ನತ ಶ್ರೇಣಿಯ ಹಳ್ಳ / ನದಿ ಪಾತ್ರಗಳ ವ್ಯಾಪ್ತಿಯಲ್ಲಿ ಗುರುತಿಸುವ ಮರಳು ಬ್ಲಾಕ್‌ಗಳನ್ನು ಜಿಲ್ಲೆಯ ಸಾಂಪ್ರದಾಯಿಕ ಮರಳು ತೆಗೆಯುವ ಸಮುದಾಯದವರಿಗೆ ಟೆಂಡರ್-ಕಂ-ಹರಾಜು ಮೂಲಕ ಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಮುಂದುವರೆದು, ದಿನಾಂಕ 17.03.2023ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023ನ್ನು ಜಾರಿಗೆ ತಂದಿದ್ದು, ಸದರಿ ತಿದ್ದುಪಡಿ ನಿಯಮ 31-ZB(3) ರಲ್ಲಿ ಕರಾವಳಿ ಜಿಲ್ಲೆಗಳ ಕರಾವಳಿ ನಿಯಂತ್ರಣ ವಲಯ ಹೊರತುಪಡಿಸಿದ (Non-CRZ) ಕಿಂಡಿ ಅಣೆಕಟ್ಟು ಪ್ರದೇಶಗಳಲ್ಲಿ ಹೂಳಿನೊಂದಿಗೆ ದೊರೆಯುವ ಮರಳನ್ನು ಜಿಲ್ಲೆಯ ಸಾಂಪ್ರದಾಯಿಕ ಮರಳು ತೆಗೆಯುವ ಸಮುದಾಯದವರಿಗೆ ಟೆಂಡರ್-ಕಂ-ಹರಾಜು ಮೂಲಕ ಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಮೇಲ್ಕಂಡಂತೆ, ಕರಾವಳಿ ಜಿಲ್ಲೆಯ ಸಾಂಪ್ರದಾಯಿಕ ಮರಳು ತೆಗೆಯುವ ವ್ಯಕ್ತಿ / ಸಮುದಾಯದವರಿಗೆ ಜಿಲ್ಲಾ ವ್ಯಾಪ್ತಿಯ ಮರಳು ತೆಗೆಯುವ ಎಲ್ಲಾ ಮೂಲಗಳಾದ ಉನ್ನತ ಶ್ರೇಣಿಯ ಹಳ್ಳ/ನದಿ ಪಾತ್ರಗಳಲ್ಲಿ, ಕಿಂಡಿ ಅಣೆಕಟ್ಟು ಪ್ರದೇಶಗಳಲ್ಲಿ ಮತ್ತು CRZ ನದಿ ಪಾತ್ರದ ಮರಳು ದಿಬ್ಬಗಳಲ್ಲಿ ದೊರೆಯುವ ಮರಳನ್ನು ತೆಗೆದು ವಿಲೇವಾರಿ ಮಾಡಲು ಅವಕಾಶ ಕಲ್ಪಿಸಲಾಗಿದೆ. |

. . . 2

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರತ್ಯೇಕವಾಗಿ ಮಂಗಳೂರಿನ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮರಳು ಅಭಾವವಿದ್ದು, Non-CRZ ಪರವಾನಿಗೆ ನೀಡಿದ ಇಲಾಖೆಗೆ ಮರಳು ಬೇಡಿಕೆ ಇಲ್ಲದೇ ಇರುವುದು ಹಾಗೂ CRZ ಪ್ರದೇಶದಲ್ಲಿ ಯಥೇಚ್ಛವಾಗಿ ಅಕ್ರಮ ಮರಳು ದಂಧೆ ನಡೆಸುತ್ತಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು;

- ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ IV, V ಮತ್ತು ಉನ್ನತ ಶ್ರೇಣಿಯ ಹಳ್ಳ /ನದಿಗಳ ಪಾತ್ರಗಳಲ್ಲಿ ಟೆಂಡರ್ ಕಂ-ಹರಾಜು ಮೂಲಕ 18 ಮತ್ತು ಸರ್ಕಾರಿ ಕಾಮಗಾರಿಗಳಿಗೆ 05 ಮರಳು ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ.
- ಮುಂದುವರೆದು, ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 16 ಎಂ-ಸ್ಯಾಂಡ್ ಘಟಕಗಳು ಕಾರ್ಯ ನಿರ್ವಹಿಸುತ್ತಿರುತ್ತವೆ. ಸದರಿ ಮೂಲಗಳಿಂದ ಮಂಗಳೂರು ಹಾಗೂ ಸುತ್ತಮುತ್ತಲಿನ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಕೆಯಾಗುತ್ತಿದ್ದು, ಜಿಲ್ಲೆಯಲ್ಲಿ ಮರಳಿನ ಅಭಾವ ಇರುವುದು ಕಂಡುಬಂದಿರುವುದಿಲ್ಲ.
- IV, V ಮತ್ತು ಉನ್ನತ ಶ್ರೇಣಿಯ ಹಳ್ಳ /ನದಿಗಳ ಪಾತ್ರಗಳಲ್ಲಿ ಸರ್ಕಾರಿ ಕಾಮಗಾರಿಗಳಿಗಾಗಿ ಲೋಕೋಪಯೋಗಿ ಇಲಾಖೆಗೆ 04 ಮತ್ತು ಸಣ್ಣ ನೀರಾವರಿ ಇಲಾಖೆಗೆ 01 ಮರಳು ಬ್ಲಾಕ್ ಸೇರಿದಂತೆ ಒಟ್ಟು 05 ಮರಳು ಬ್ಲಾಕ್ ಗಳಿಗೆ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿರುತ್ತದೆ.
- ಈ ಪೈಕಿ ಲೋಕೋಪಯೋಗಿ ಇಲಾಖೆಯ 02 ಮರಳು ಬ್ಲಾಕ್ ಗಳಲ್ಲಿ ಗಣಿಗಾರಿಕೆಯನ್ನು ಪ್ರಾರಂಭಿಸಿ 01 ಮರಳು ಬ್ಲಾಕ್ ನಿಂದ ಈಗಾಗಲೇ ಇಲಾಖಾ ಕಾಮಗಾರಿಗಳಿಗೆ ಮರಳು ಪೂರೈಕೆಯಾಗುತ್ತಿರುತ್ತದೆ. ಉಳಿದ 02 ಮರಳು ಬ್ಲಾಕ್ ಗಳಲ್ಲಿ ಗಣಿಗಾರಿಕೆ ಪ್ರಾರಂಭಿಸಬೇಕಾಗಿರುತ್ತದೆ. ಸಣ್ಣ ನೀರಾವರಿ ಇಲಾಖೆಯ 01 ಮರಳು ಬ್ಲಾಕ್ ನಲ್ಲಿ ಗಣಿಗಾರಿಕೆ ನಡೆಸಿ ಇಲಾಖೆಯ ಕಾಮಗಾರಿಗಳಿಗೆ ಪೂರೈಕೆಯಾಗುತ್ತಿರುತ್ತದೆ.
- ದಕ್ಷಿಣ ಕನ್ನಡ ಜಿಲ್ಲೆಯ CRZ ನದಿ ಪಾತ್ರಗಳ ಪ್ರದೇಶದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ನಿಯಮಾನುಸಾರ ಕ್ರಮ ವಹಿಸಲಾಗಿದ್ದು, ಅಕ್ರಮ ಮರಳು ದಂಧೆ ಪ್ರಕರಣಗಳನ್ನು ಪತ್ತೆ ಹಚ್ಚಿ, ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಪೊಲೀಸ್ ಠಾಣೆ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸಿದ್ದು ಹಾಗೂ ದಂಡ ವಿಧಿಸಿ, ಸಂಗ್ರಹಿಸಲಾಗಿರುತ್ತದೆ.
- ಅದರಂತೆ, 2023-24 ಮತ್ತು 2024-25ನೇ ಸಾಲಿನ ಜನವರಿ ಅಂತ್ಯದವರೆಗೆ ಜಿಲ್ಲಾ ಮರಳು ಸಮಿತಿಯಿಂದ CRZ ವ್ಯಾಪ್ತಿಯ ನದಿ ಪಾತ್ರಗಳ ಪ್ರದೇಶದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಡಿ ಕೈಗೊಂಡ ಕ್ರಮದ ವಿವರಗಳು ಈ ಕೆಳಕಂಡಂತಿದೆ:

| ವರ್ಷ | ಪತ್ತೆಯಾದ ಪ್ರಕರಣಗಳು | ಸಂಗ್ರಹಿಸಲಾದ ದಂಡ (₹ಲಕ್ಷಗಳಲ್ಲಿ) | ದಾಖಲಾದ FIR / PCR |
|---|---|---|---|
| 2023-24 | 108 | 42.90 | 5 |
| 2024-25 (ಜನವರಿ ಮಾಹೆವರೆಗೆ) | 59 | 14.72 | 27 |
| ಒಟ್ಟು | 167 | 57.62 | 32 |

. . . 3

| | | |
|---|---|---|
| ಇ) | ಅಕ್ರಮ ಮರಳುಗಾರಿಕೆಯನ್ನು ಸಕ್ರಮಗೊಳಿಸಲು ಜಿಲ್ಲಾಡಳಿತ ಸಂಪೂರ್ಣ ವಿಫಲವಾಗಿದ್ದು; ಈ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಗೊಂಡರೂ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು; | • ಅಕ್ರಮ ಮರಳುಗಾರಿಕೆಯನ್ನು ಸಕ್ರಮಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>• ಮುಂದುವರೆದು, ದಕ್ಷಿಣ ಕನ್ನಡ ಜಿಲ್ಲೆಯ Non CRZ ವ್ಯಾಪ್ತಿಯ ಉನ್ನತ ಶ್ರೇಣಿಯ ಹಳ್ಳ / ನದಿ ಪಾತ್ರಗಳ ಪ್ರದೇಶಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆ ನಡೆಯುತ್ತಿದ್ದ ಪ್ರದೇಶ / ಸ್ಥಳಗಳನ್ನು ಪತ್ತೆ ಹಚ್ಚಿ, ಅಂತಹ ಒಟ್ಟು 11 ಪ್ರದೇಶಗಳಲ್ಲಿ ಮರಳು ನಿಕ್ಷೇಪವಿರುವ ಬಗ್ಗೆ ಖಚಿತಪಡಿಸಿಕೊಂಡು ತಾಲ್ಲೂಕು ಮರಳು ಸಮಿತಿಯಿಂದ ಹೊಸ ಮರಳು ಬ್ಲಾಕ್ ಗಳನ್ನು ಗುರುತಿಸಲಾಗಿರುತ್ತದೆ.<br>• ಈ ಪೈಕಿ 06 ಬ್ಲಾಕ್ ಗಳನ್ನು ಈಗಾಗಲೇ ಟೆಂಡರ್-ಕಂ-ಹರಾಜು ಪ್ರಕ್ರಿಯೆಗೆ ಒಳಪಡಿಸಲಾಗಿರುತ್ತದೆ. ಉಳಿದ 05 ಮರಳು ಬ್ಲಾಕ್ ಗಳಿಗೆ ಟೆಂಡರ್-ಕಂ-ಹರಾಜು ಮೂಲಕ ವಿಲೇಪಡಿಸಲು ಜಿಲ್ಲಾ ಮರಳು ಸಮಿತಿಯು ಅನುಮೋದನೆ ನೀಡಿದ್ದು, ಸದರಿ ಮರಳು ಬ್ಲಾಕ್ ಗಳನ್ನು ಟೆಂಡರ್-ಕಂ-ಹರಾಜು ಪ್ರಕ್ರಿಯೆಗೆ ಒಳಪಡಿಸಲು ಕ್ರಮವಹಿಸಲಾಗಿದೆ.<br>• ಮೇಲ್ಕಂಡಂತೆ ಜಿಲ್ಲಾ ಮತ್ತು ತಾಲ್ಲೂಕು ಮರಳು ಸಮಿತಿಗಳಿಂದ ಅನಧಿಕೃತ ಗಣಿಗಾರಿಕೆ ನಡೆಯುತ್ತಿರುವ ಸ್ಥಳಗಳನ್ನು ಪತ್ತೆ ಹಚ್ಚಿ ನಿಯಮಾನುಸಾರ ಗಣಿಗಾರಿಕೆಗೆ ಒಳಪಡಿಸಲು ಹಾಗೂ ಅನಧಿಕೃತ ಗಣಿಗಾರಿಕೆ ನಡೆಸುತ್ತಿದ್ದವರ ವಿರುದ್ಧ ನಿಯಮಾನುಸಾರ ಪ್ರಕರಣ ದಾಖಲಿಸಲು ಹಾಗೂ ದಂಡ ವಿಧಿಸಿ ಸಂಗ್ರಹಿಸಲು ಕ್ರಮ ವಹಿಸಲಾಗುತ್ತಿದೆ. ಅನಧಿಕೃತ ಗಣಿಗಾರಿಕೆ ತಡೆಗಟ್ಟಲು ಜಿಲ್ಲಾಡಳಿತದಿಂದ ಆದ್ಯತೆ ಮೇಲೆ ಕ್ರಮ ವಹಿಸಲಾಗಿದೆ. |
| ಈ) | ಮರಳು ಮಾಫಿಯಾ ದಂಧೆಗೆ ಯಾವುದೇ ಕ್ರಮ ಕೈಗೊಳ್ಳದೇ ಕಾನೂನು ಉಲ್ಲಂಘನೆ ಆಗಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ಈ ಸಂಬಂಧ ಎಷ್ಟು ಪ್ರಕರಣ ದಾಖಲಾಗಿದೆ; ಎಷ್ಟು ಸ್ವತ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ; ಸರ್ಕಾರಕ್ಕೆ ಉಂಟಾದ ತೆರಿಗೆ ನಷ್ಟ ಎಷ್ಟು; (ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ವಿವರ ನೀಡುವುದು) | • ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಗಣಿಗಾರಿಕೆಯನ್ನು ನಿಯಂತ್ರಿಸಲು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಅದರಂತೆ, 2024-25ನೇ ಸಾಲಿನ ಜನವರಿ ಅಂತ್ಯದವರೆಗೆ ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಡಿ ಒಟ್ಟು 173 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿರುತ್ತದೆ.<br>• ಸದರಿ ಪ್ರಕರಣಗಳಲ್ಲಿ 107 ಲಾರಿ ವಾಹನಗಳು, 91 ದೋಣಿಗಳು, 06 ಮೋಟಾರ್ ಯಂತ್ರಗಳು, 01 ಡ್ರೆಡ್ಜಿಂಗ್ ಯಂತ್ರ ಮತ್ತು 13 ಗ್ಯಾಸ್ ಸಿಲೆಂಡರ್ ಗಳನ್ನು ವಶಪಡಿಸಿಕೊಂಡು ಸಂಬಂಧಪಟ್ಟ ಪೊಲೀಸ್ / ನ್ಯಾಯಾಲಯಗಳಲ್ಲಿ 82 ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ ಹಾಗೂ ₹54.04 ಲಕ್ಷಗಳ ದಂಡ ವಿಧಿಸಿ ಸಂಗ್ರಹಿಸಲಾಗಿರುತ್ತದೆ.<br>• ಮುಂದುವರೆದು, ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ 2024-25ನೇ ಸಾಲಿನ ಜನವರಿ ಅಂತ್ಯದವರೆಗೆ ಒಟ್ಟು 103 ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪತ್ತೆ ಹಚ್ಚಲಾಗಿರುತ್ತದೆ. ಸದರಿ ಪ್ರಕರಣಗಳಲ್ಲಿ 90 ವಾಹನಗಳು ಹಾಗೂ 06 ದೋಣಿಗಳು ವಶಪಡಿಸಿಕೊಂಡು ₹19.59 ಲಕ್ಷಗಳ ದಂಡ ವಿಧಿಸಿ ಸಂಗ್ರಹಿಸಲಾಗಿರುತ್ತದೆ. |

| | | |
|---|---|---|
| ಉ) | ಕರಾವಳಿಯಲ್ಲಿ ಅಕ್ರಮ ಮರಳು ದಂಧೆ ತಡೆಗಟ್ಟಲು ಸರ್ಕಾರದ ಮುಂದೆ ಇರುವ ಯೋಜನೆಗಳು ಯಾವುವು; ಮರಳು ದಂಧೆಯಲ್ಲಿ ಶಾಮೀಲು ಆಗಿರುವವರ ವಿರುದ್ಧ ಸರ್ಕಾರದ ಕ್ರಮವೇನು (ವಿವರ ನೀಡುವುದು) | • ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಸದರಿ ಸಮಿತಿಗಳಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿಯಲ್ಲಿ ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಚೆಕ್ ಪೋಸ್ಟ್ ಸ್ಥಾಪನೆ ಮಾಡಲು ಮತ್ತು ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ನಿಯಮ ರೂಪಿಸಲಾಗಿರುತ್ತದೆ.<br>• ಮರಳು ಹಾಗೂ ಇತರ ಉಪಖನಿಜ ಸಾಗಾಣಿಕೆ ವಾಹನಗಳ ಚಲನವಲನಗಳ ಮೇಲೆ ನಿಗಾವಹಿಸಲು ಕೇಂದ್ರೀಕೃತ One State One GPS ವ್ಯವಸ್ಥೆಯನ್ನು ಜಾರಿಗೊಳಿಸ ಲಾಗಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ.<br>• ಮೇಲ್ಕಂಡಂತೆ, ಅಕ್ರಮ ಮರಳು ಗಣಿಗಾರಿಕೆಯನ್ನು ನಿಯಂತ್ರಿಸಲು ಸರ್ಕಾರದಿಂದ ಕ್ರಮ ವಹಿಸಲಾಗಿರುತ್ತದೆ.<br>• ಅಕ್ರಮ ಮರಳು ದಂಧೆಯಲ್ಲಿ ಶಾಮೀಲಾದ ವ್ಯಕ್ತಿಗಳ ವಿರುದ್ಧ ನಿಯಮಗಳನ್ವಯ ದಂಡ ವಸೂಲಿ ಮಾಡಲು ಹಾಗೂ ಸಂಬಂಧಪಟ್ಟ ಪೋಲಿಸ್ ಠಾಣೆ ಹಾಗೂ ಮಾನ್ಯ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ ಸಿಐ -ಎಂಎಂಎನ್/63/2025

(ಎಸ್.ಎಸ್.ಮಲ್ಲಿಕಾರ್ಜುನ)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.